# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:21-06-2023ರಂದು ಬುಧವಾರ ಪೂರ್ವಾಹ್ನ 11.00 ಗಂಟೆಗೆ ಆನ್‌ಲೈನ್ ಮೂಲಕ ನಡೆದ ವಿಶೇಷ ಸಿಂಡಿಕೇಟ್ ಸಭೆ"ಯ ನಡಾವಳಿಗಳು.

ಹಾಜರಾದ ಸದಸ್ಯರು:

| | | |
|---|---|---|
| 1. | ಪ್ರೊ. ಬಿ.ಪಿ. ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಪ್ರೊ. ಗೀತಾ ಸಿ. ಕುಲಸಚಿವರು (ಪ್ರಭಾರ) | ಸದಸ್ಯ ಕಾರ್ಯದರ್ಶಿಗಳು |
| 3. | ಪ್ರೊ. ನವೀನ್‌ಕುಮಾರ್ ಎಸ್.ಕೆ., ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಶ್ರೀ ಶಾಂತಕುಮಾರ್, ಜಿ.ಎಸ್., | ಸದಸ್ಯರು |
| 5. | ಶ್ರೀ ಶಶಿಧರ, ಬಿ.ಎನ್., | ಸದಸ್ಯರು |
| 6. | ಪ್ರೊ. ಗೀತಾ ಸಿ. ಡೀನರು, ಶಿಕ್ಷಣ ನಿಕಾಯ | ಸದಸ್ಯರು |
| 7. | ಪ್ರೊ. ಚಂದ್ರಶೇಖರ್ ಕೆ., | ಸದಸ್ಯರು |
| 8. | ಡಾ. ಎ.ಟಿ. ಪದ್ಮೇಗೌಡ., ಪ್ರಾಂಶುಪಾಲರು, | ಸದಸ್ಯರು |
| 9. | ಡಾ. ಎಂ. ಸ್ವಾಮಿ., ಪ್ರಾಂಶುಪಾಲರು, | ಸದಸ್ಯರು |
| 10. | ಡಾ. ಸಂಧ್ಯಾ ಕಾವೇರಿ ಕೆ., ಪ್ರಾಂಶುಪಾಲರು, | ಸದಸ್ಯರು |

ಗೈರುಹಾಜರಾದ ಸದಸ್ಯರು:

| | | |
|---|---|---|
| 1. | ಶ್ರೀ ಓಂ ಪ್ರಕಾಶ್ ರಾಜೋಳೆ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಪ್ರತಿನಿಧಿ | ಸದಸ್ಯರು |
| 2. | ಶ್ರೀ ವಿನಯ್‌ಕುಮಾರ್ ಶೆಟ್ಟಿ, ಪ್ರಾಂಶುಪಾಲರು, | ಸದಸ್ಯರು |
| 3. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 5. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 6. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಕುಲಸಚಿವರು ಆತ್ಮೀಯವಾಗಿ ಸ್ವಾಗತಿಸಿದರು. ಘನತೆವೆತ್ತ ಕುಲಾಧಿಪತಿಗಳಿಂದ ಹೊಸದಾಗಿ ಸಿಂಡಿಕೇಟ್‌ಗೆ ನಾಮನಿರ್ದೇಶಿತರಾದ ಶ್ರೀ ಶಾಂತಕುಮಾರ್ ಜಿ. ಎಸ್., ಹಾಗೂ ಶ್ರೀ ಶಶಿಧರ, ಬಿ.ಎನ್., ಇವರುಗಳನ್ನು ಸಭೆಗೆ ಪರಿಚಯಿಸಿ, ಸ್ವಾಗತ ಕೋರಿದರು ಹಾಗೂ ಕುವೆಂಪು ವಿಶ್ವವಿದ್ಯಾಲಯದ ಶೈಕ್ಷಣಿಕ ಮತ್ತು ಸಂಶೋಧನಾ ಅಭಿವೃದ್ಧಿಗೆ ತಮ್ಮ ಅಮೂಲ್ಯ ಸಲಹೆ ಮತ್ತು ಸಹಕಾರ ನೀಡುವಂತೆ ಕೋರಿದರು. ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿಶ್ವವಿದ್ಯಾಲಯದ 2023-24ನೇ ಸಾಲಿನ ಸ್ಥಳೀಯ ತಪಾಸಣಾ ವರದಿಗಳನ್ನು ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಈ ವಿಶೇಷ ಸಿಂಡಿಕೇಟ್ ಸಭೆಯನ್ನು ಆನ್‌ಲೈನ್ ಮೂಲಕ ಕರೆಯಲಾಗಿದ್ದು, ಈ ಬಗ್ಗೆ ಸಭೆಯ ಅನುಮೋದನೆ ಕೋರಿದರು. ನಂತರ ಕಾರ್ಯಸೂಚಿಯನ್ವಯ ವಿಷಯವನ್ನು ಕೈಗೆತ್ತಿಕೊಳ್ಳಲಾಯಿತು.

ಪು. ತಿ. ನೋ.,

## ಕಾಲೇಜು ಅಭಿವೃದ್ಧಿ ಪರಿಷತ್ತು

**2023–ಸಿಂ–5.01:** ಕಾಲೇಜುಗಳ 2023–24ನೇ ಸಾಲಿನ ಸಂಯೋಜನೆ ವರದಿಗಳನ್ನು ಸಿಂಡಿಕೇಟ್ ಸಭೆಯ ಅನುಮೋದನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: ಇಡಿ 47 ಯುಎನ್‌ಇ 2023, ಬೆಂಗಳೂರು, ದಿನಾಂಕ: 15–06–2023ರ ಪ್ರಕಾರ ಕುವೆಂಪು ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳ ಸಂಯೋಜನೆ ಪ್ರಕ್ರಿಯೆಗಳನ್ನು ನಡೆಸಲಾಗಿದ್ದು, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000, ಪ್ರಕರಣ 59(9)ರನ್ವಯ 2023–24ಸಾಲಿನ ಸ್ಥಳೀಯ ತಪಾಸಣಾ ವರದಿಗಳನ್ನು ಸಭೆಯು ಅನುಮೋದಿಸಿತು.

ಅಂತಿಮವಾಗಿ ಆನ್‌ಲೈನ್ ಮೂಲಕ ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಮತ್ತು ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯು ಮುಕ್ತಾಯವಾಯಿತು.

ಕುಲಸಚಿವರು
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

ಕುಲಪತಿಗಳು
ಕುವೆಂಪು ವಿಶ್ವವಿದ್ಯಾನಿಲಯ
ಶಂಕರಘಟ್ಟ – 577 451.
ಶಿವಮೊಗ್ಗ ಜಿಲ್ಲೆ.